
# ಹೊರಟ್ಟಿಗೆ ಲಿಮ್ಕಾ ದಾಖಲೆ ಗರಿ

ಹುಬ್ಬಳ್ಳಿ: ಸಭಾಪತಿ ಬಸವರಾಜ ಹೊರಟ್ಟಿ ಅವರ ಮಡಿಲಿಗೆ ಲಿಮ್ಕಾ ದಾಖಲೆಯ ಗರಿ ಸೇರ್ಪಡೆಯಾಗಿದೆ. ವಿಧಾನ ಪರಿಷತ್ತಿನಲ್ಲಿ ಸತತ 43 ವರ್ಷಗಳಿಂದ ಸೋಲಿಲ್ಲದ ಸರದಾರರಾಗಿ ಪಶ್ಚಿಮ ಶಿಕ್ಷಕರ ಕ್ಷೇತ್ರವನ್ನು ಬಸವರಾಜ ಹೊರಟ್ಟಿ ಪ್ರತಿನಿಧಿಸುತ್ತಿದ್ದಾರೆ. 1970ರಿಂದ 2022ರವರೆಗೆ ಶಿಕ್ಷಕರ ಕ್ಷೇತ್ರದಿಂದ ಆಯ್ಕೆಯಾಗುತ್ತಿರುವ ಹೊರಟ್ಟಿ, ಒಟ್ಟು ಎಂಟು ಚುನಾವಣೆಗಳಲ್ಲಿ ಸ್ಪರ್ಧಿಸಿ ಅಜೇಯರಾಗಿದ್ದಾರೆ.

1970ರಲ್ಲಿ ಪಕ್ಷೇತರರಾಗಿ ಚುನಾಯಿತರಾಗಿದ್ದ ಅವರು, 1983ರಿಂದ ಕಳೆದ ಚುನಾವಣೆಯವರೆಗೆ ಜನತಾ ಪಕ್ಷ, ಜನತಾ ದಳ (ಎಸ್) ಸೇರಿದಂತೆ ಜನತಾ ಪರಿವಾರದಲ್ಲಿದ್ದರು. 2022ರ ಚುನಾವಣೆಯಲ್ಲಿ ಬಿಜೆಪಿ ಸೇರ್ಪಡೆಯಾಗಿ ಆಯ್ಕೆಗೊಂಡಿದ್ದಾರೆ. ಮೇಲ್ಮನೆಯ ಸಭಾಪತಿ ಹೊರಟ್ಟಿಯವರ ಸತತ ಎಂಟು ಗೆಲವುಗಳು ದೇಶದ ಚುನಾಯಿತ ವ್ಯವಸ್ಥೆಯಲ್ಲಿ ದಾಖಲೆ.




ಲೋಕಸಭೆ ಅಥವಾ ರಾಜ್ಯಸಭೆ ಇಲ್ಲವೇ ಯಾವುದೇ ರಾಜ್ಯದ ವಿಧಾನಸಭೆ ಅಥವಾ ವಿಧಾನ ಪರಿಷತ್ತಿನಲ್ಲಿ 43 ವರ್ಷ 201 ದಿನಗಳಿಂದ ಸೋಲಿಲ್ಲದೇ ಸದಸ್ಯರಾಗಿರುವ ಭಾರತದ ಏಕೈಕ ರಾಜಕಾರಣಿ ಹೊರಟ್ಟಿ, ಇಷ್ಟೊಂದು ಸುದೀರ್ಘ ಚುನಾವಣಾ ರಾಜಕಾರಣವನ್ನು ದೇಶದ ಇತಿಹಾಸದಲ್ಲಿ ಮತ್ತೊಬ್ಬರು ಮಾಡಿಲ್ಲ. ವಿವಿಧ ಕ್ಷೇತ್ರಗಳಲ್ಲಿ ಭಾರತೀಯರು ಮಾಡುವ ವಿಶ್ವ ಮಟ್ಟದ ದಾಖಲೆಯನ್ನು ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ಪುಸ್ತಕ ಪ್ರತಿವರ್ಷ ದಾಖಲಿಸಿ ಬಿಡುಗಡೆ ಮಾಡುತ್ತದೆ. ಪ್ರಸಕ್ತ ವರ್ಷದ ಪುಸ್ತಕವನ್ನು ಈಗ ಸಂಸ್ಥೆ ಬಿಡುಗಡೆ ಮಾಡಿದೆ.




ಬಸವರಾಜ ಹೊರಟ್ಟಿ ಅವರ ಈ ಸಾಧನೆ ಈಗಾಗಲೇ ಲಂಡನ್ನಿನ ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್‌ಗೆ ಸೇರಿದೆ (2022). ಸಭಾಪತಿಗಳ ಈ ದೀರ್ಘ ಯಾನದ ಅಂಕಿ–ಸಂಖ್ಯೆಗಳು ಭಾರತದ ಚುನಾವಣಾ ಆಯೋಗದಲ್ಲಿ ದಾಖಲೀಕರಣಗೊಂಡು ಗೆಜೆಟ್‌ನಲ್ಲಿ ಪ್ರಕಟವಾಗಿವೆ.

ಸಿಕ್ಕಿಂ ಮಾಜಿ ಮುಖ್ಯಮಂತ್ರಿ ಪವನ ಕುಮಾರ್ ಸಿಎಂ ಆಗಿ 24 ವರ್ಷ 165 ದಿನ ಆಡಳಿತ ನಡೆಸಿ, ಪಶ್ಚಿಮ ಬಂಗಾಳದ ಮಾಜಿ ಸಿಎಂ ಜ್ಯೋತಿ ಬಸು ಅವರ 23 ವರ್ಷ 137 ದಿನಗಳ ದಾಖಲೆಯನ್ನು ಅಳಿಸಿರುವುದನ್ನು ಕೂಡ ಈ ಬಾರಿಯ ಲಿಮ್ಕಾ ದಾಖಲೆ ಪುಸ್ತಕದಲ್ಲಿ ನಮೂದಿಸಲಾಗಿದೆ.

ಕನ್ನಡಪ್ರಭ

# 8 ಬಾರಿ ಮೇಲ್ಮನೆಗೆ ಆಯ್ಕೆಯಾದ ಹೊರಟ್ಟಿ ಲಿಮ್ಕಾ ದಾಖಲೆಗೆ



ಹುಬ್ಬಳ್ಳಿ: ಸತತ ಎಂಟು ಬಾರಿ ವಿಧಾನಪರಿಷತ್‌ಗೆ ಆಯ್ಕೆಯಾಗಿರುವ ಸಭಾಪತಿ ಬಸವರಾಜ ಹೊರಟ್ಟಿ ದಾಖಲೆ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ಗೆ ಸೇರ್ಪಡೆಯಾಗಿದೆ. ವಿವರ ↘ 5

HUBBALLI Edition

# ಲಿಮ್ಕಾ ರೆಕಾರ್ಡ್ಸ್‌ನಲ್ಲಿ ಬಸವರಾಜ ಹೊರಟ್ಟಿ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಳೆದ ನಾಲ್ಕು ದಶಕಗಳಿಗಿಂತಲೂ ಹೆಚ್ಚು ಕಾಲ ಕರ್ನಾಟಕದ ಸಾರ್ವಜನಿಕ ಹಾಗೂ ಶೈಕ್ಷಣಿಕ ವಲಯದಲ್ಲಿ ಅಪ್ರತಿಮ ಸಾಧನೆಗೈದ ಸಭಾಪತಿ ಬಸವರಾಜ ಹೊರಟ್ಟಿ ಅವರ ಮುಡಿಗೆ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ದಾಖಲೆಯ ಗರಿ ಸೇರ್ಪಡೆಯಾಗಿದೆ.

2024ನೇ ಸಾಲಿನ ವಾರ್ಷಿಕ ಪುಸ್ತಕದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರ ಐತಿಹಾಸಿಕ ದಾಖಲೆಗಳನ್ನು ದಾಖಲಿಸಿ ಪ್ರಕಟಿಸಲಾಗಿದೆ. ಬಸವರಾಜ ಹೊರಟ್ಟಿಯವರು



ಇಲ್ಲಿಯವರೆಗೆ ಎಂಟು ಬಾರಿ ಗೆಲುವನ್ನು ತಮ್ಮದಾಗಿಸಿಕೊಳ್ಳುವ ಮೂಲಕ ಐತಿಹಾಸಿಕ ದಾಖಲೆಗೆ ಪಾತ್ರರಾಗಿದ್ದಾರೆ. ಭಾರತದ ಇತಿಹಾಸದಲ್ಲಿಯೇ ಇದೊಂದು ಐತಿಹಾಸಿಕ ದಾಖಲೆಯಾಗಿದೆ. ಇಷ್ಟೊಂದು ಸುದೀರ್ಘ ಚುನಾವಣಾ ಅವಧಿಯ ರಾಜಕಾರಣವನ್ನು ಮತ್ತೊಬ್ಬರು ದೇಶದ ಇತಿಹಾಸದಲ್ಲಿ ಮಾಡಿಲ್ಲ.

ಶಿಕ್ಷಕರೊಬ್ಬರು ಶಿಕ್ಷಕರ ಪ್ರತಿನಿಧಿಯಾಗಿ ಹಲವಾರು ಖಾತೆಗಳ ಸಚಿವರಾಗಿ ಮೂರನೇ ಬಾರಿ ಸಭಾಪತಿಗಳಾಗಿ ಸೇವೆ ಸಲ್ಲಿಸುತ್ತಿರುವದು ಇತಿಹಾಸ. ಬಸವರಾಜ ಹೊರಟ್ಟಿ ಅವರು ನಾಡಿನ ಶಿಕ್ಷಕ ಸಮೂಹದ ಸ್ವಾಭಿಮಾನದ ಸಂಕೇತವಾಗಿದ್ದು, ಇದೀಗ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ದಾಖಲಾಗಿರುವುದು ಅವರ ಹಿತೈಷಿಗಳಿಗೆ, ಅಭಿಮಾನಿಗಳಿಗೆ ಶಿಕ್ಷಕ ಸಮೂಹಕ್ಕೆ ಹರ್ಷ ತಂದಿದೆ.

# ಸಭಾಪತಿ ಬಸವರಾಜ ಹೊರಟ್ಟಿ ಅವರ ಮೂಡಿಗೆ ಮತ್ತೊಂದು ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ದಾಖಲೆಯ ಗರಿ ಸೇರ್ಪಡೆ.....

**ಗದಗ ಸಂಜೆ ವಾರ್ತೆ :**

ಕಳೆದ ನಾಲ್ಕು ದಶಕಗಳಿಂದ ಸಾರ್ವಜನಿಕ ಹಾಗೂ ಶೈಕ್ಷಣಿಕ ವಲಯದಲ್ಲಿ ಅಪ್ರತಿಮ ಸಾಧನೆಗೈದ ಏಕೈಕ ಕನ್ನಡಿಗ ಹಾಗೂ ಒಂದೇ ಕ್ಷೇತ್ರದಿಂದ ಸತತ ಎಂಟು ಬಾರಿ ಆಯ್ಕೆಯಾಗಿ ವಿಶ್ವ ದಾಖಲೆ ನಿರ್ಮಿಸಿ ಕಳೆದ 43 ವರ್ಷಗಳಿಂದ ವಿಧಾನ ಪರಿಷತ್ತಿನಲ್ಲಿ ಶಿಕ್ಷಕರ ಹಿತ ಕಾಯುವಲ್ಲಿ ಶ್ರಮಿಸುತ್ತಿರುವ ಸಭಾಪತಿ ಬಸವರಾಜ್ ಹೊರಟ್ಟಿ ಅವರ ಮೂಡಿಗೆ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ದಾಖಲೆಯ ಗರಿ ಸೇರ್ಪಡೆಯಾಗಿದೆ.

1990ರಲ್ಲಿ ಆರಂಭಗೊಂಡ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ಸಂಸ್ಥೆ ಭಾರತೀಯರ ವಿಶ್ವ ದಾಖಲೆಗಳನ್ನು ದಾಖಲಿಸುವ ಸಂಸ್ಥೆಯಾಗಿದೆ. ಭಾರತದಲ್ಲಿ ಪ್ರಕಟವಾದ 2024ನೇ ಸಾಲಿನ ವಾರ್ಷಿಕ ಪುಸ್ತಕದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರ ಐತಿಹಾಸಿಕ ದಾಖಲೆಗಳನ್ನು ದಾಖಲಿಸಿ ಪ್ರಕಟಿಸಲಾಗಿದೆ .

ಈ ಬಾರಿಯ ವಾರ್ಷಿಕ ಪುಸ್ತಕದಲ್ಲಿ ಸಿಕ್ಕಿಂ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಪವನ್ ಕುಮಾರ್ ಅವರು 24 ವರ್ಷ 165 ದಿನಗಳ ಕಾಲ ಮುಖ್ಯಮಂತ್ರಿಗಳಾಗಿ ಸಲ್ಲಿಸಿದ ಸೇವಾ ಅವಧಿ ದಿನಗಳನ್ನು ದಾಖಲಿಸಲಾಗಿದೆ.

ಜೊತೆಗೆ ಪಶ್ಚಿಮ ಬಂಗಾಳದ ಮಾಜಿ



ಮುಖ್ಯಮಂತ್ರಿಗಳಾದ ಜ್ಯೋತಿ ಬಸು ಅವರ 23 ವರ್ಷ 137 ದಿನಗಳ ಕಾಲ ಮುಖ್ಯಮಂತ್ರಿಗಳಾದ ಅವಧಿಯನ್ನು ದಾಖಲಿಸಲಾಗಿದೆ.

ಸಭಾಪತಿ ಬಸವರಾಜ್ ಹೊರಟ್ಟಿ ಅವರು 1980 ರಿಂದ ಸ್ಪರ್ಧಿಸಿದ ಎಲ್ಲ ಚುನಾವಣೆಗಳಲ್ಲಿ ಜಯಗಳಿಸಿದ ಅಂಕಿ ಸಂಖ್ಯೆಗಳನ್ನ ಸಂಗತಿಗಳನ್ನ ಹಾಗೂ ಇನ್ನಿತರ ಮಾಹಿತಿಯನ್ನು ಪ್ರಕಟಿಸಿದ್ದಾರೆ. ಹೊರಟ್ಟಿಯವರು ಇಲ್ಲಿಯವರೆಗೆ ಎಂಟು ಬಾರಿ ಗೆಲುವನ್ನ ತಮ್ಮದಾಗಿಸಿಕೊಳ್ಳುವ ಮೂಲಕ ಐತಿಹಾಸಿಕ ದಾಖಲೆಗೆ ಪಾತ್ರರಾಗಿದ್ದಾರೆ.

ಸಭಾಪತಿ ಬಸವರಾಜ್ ಹೊರಟ್ಟಿ ಅವರು ವಿಧಾನ ಪರಿಷತ್ ಪ್ರವೇಶಿಸಿ ಇಂದಿಗೆ 43 ವರ್ಷ 201 ದಿನಗಳಾದವು. ಇದೊಂದು ದೇಶದ ಇತಿಹಾಸದಲ್ಲಿಯೇ ಐತಿಹಾಸಿಕ ದಾಖಲೆ. ಇಷ್ಟೊಂದು ಸುದೀರ್ಘ ಚುನಾವಣಾ ಅವಧಿಯ ರಾಜಕಾರಣವನ್ನು ಮತ್ತೊಬ್ಬರು ದೇಶದ ಇತಿಹಾಸದಲ್ಲಿ ಮಾಡಿಲ್ಲ. ಇಂತಹ ದಾಖಲೆಯನ್ನು ಹಿಂದೆಯೂ ಯಾರು ಮಾಡಿಲ್ಲ ಬಹುಶಹ ಮುಂದೆಯೂ ಯಾರು ಮಾಡಲು ಸಾಧ್ಯವಿಲ್ಲ ಎನಿಸುತ್ತದೆ.

ಈಗಾಗಲೇ ಸಭಾಪತಿ ಬಸವರಾಜ್ ಹೊರಟ್ಟಿ ಅವರ ಹಲವಾರು ದಾಖಲೆಗಳಲ್ಲಿ ಪ್ರಮುಖವಾಗಿ ಈಗಾಗಲೇ ಲಂಡನ್ನಿನ ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್ ದಾಖಲೆ ಗರಿ 2022 ರಲ್ಲಿ ದೊರಕಿದೆ. ಭಾರತದ ಚುನಾವಣಾ ಆಯೋಗದಲ್ಲಿ ಇವರ ಸುಧೀರ್ಘ ಸೇವಾ ಅವಧಿಯ ದಾಖಲೆಗಳು ಅಂಕಿ ಸಂಖ್ಯಾ ಇಲಾಖೆಯಲ್ಲಿ ದಾಖಲಿಕರಣಗೊಂಡು ಗೆಜೆಟ್ ನಲ್ಲಿ ಪ್ರಕಟವಾಗಿವೆ.

ಶಿಕ್ಷಕರೊಬ್ಬರು ಶಿಕ್ಷಕರ ಪ್ರತಿನಿಧಿಯಾಗಿ ಹಲವಾರು ಖಾತೆಗಳ ಸಚಿವರಾಗಿ ಮೂರನೇ ಬಾರಿ ಸಭಾಪತಿಗಳಾಗಿ ಸೇವೆ ಸುತ್ತಿರುವದು ಇತಿಹಾಸ. ಬಸವರಾಜ್ ಹೊರಟ್ಟಿ ಅವರು ನಾಡಿನ ಶಿಕ್ಷಕ ಸಮೂಹದ ಸ್ವಾಭಿಮಾನದ ಸಂಕೇತ. ಇವರ ಸಾಧನೆಯನ್ನು ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ನಲ್ಲಿ ಪ್ರಕಟಿಸಿದ್ದು ಅವರ ಹಲವಾರು ಹಿತೈಷಿಗಳಿಗೆ ಅಭಿಮಾನಿಗಳಿಗೆ ಶಿಕ್ಷಕ ಸಮೂಹಕ್ಕೆ ಹರ್ಷ ತಂದಿದೆ.

# ಸತತ 8 ಸಲ ಮೇಲ್ಮನೆಗೆ: ಹೊರಟ್ಟಿ ಲಿಮ್ಕಾಗೆ

## ಇದು ದೇಶದಲ್ಲಿ ದಾಖಲೆ | ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್ ಪ್ರವೇಶ

• **ಕನ್ನಡಪ್ರಭ ವಾರ್ತೆ** ಹುಬ್ಬಳ್ಳಿ

ಸತತ ಎಂಟು ಬಾರಿ ವಿಧಾನಪರಿಷತ್‌ಗೆ ಆಯ್ಕೆಯಾಗಿರುವ ಸಭಾಪತಿ ಬಸವರಾಜ ಹೊರಟ್ಟಿ ದಾಖಲೆ ಇದೀಗ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ಗೆ ಸೇರ್ಪಡೆಯಾಗಿದೆ. ಈ ಮೂಲಕ ಭಾರತೀಯ ರಾಜಕೀಯ ಇತಿಹಾಸದಲ್ಲಿ ಕನ್ನಡಿಗ ಹೊರಟ್ಟಿ ಅವರ ಸಾಧನೆಗೆ ಮತ್ತೊಂದು ಗೌರವ ಸಿಕ್ಕಂತಾಗಿದೆ.



ಕಳೆದ ನಾಲ್ಕು ದಶಕಗಳಿಂದ ಸಾರ್ವಜನಿಕ ಹಾಗೂ ಶೈಕ್ಷಣಿಕ ವಲಯದ ಸೇವೆಯಲ್ಲಿರುವ ಹೊರಟ್ಟಿ ಅವರು ಒಂದೇ ಕ್ಷೇತ್ರ(ಶಿಕ್ಷಕರ ಕ್ಷೇತ್ರ)ದಿಂದ 1980ರಿಂದ ಸತತ 8 ಬಾರಿ ಮೇಲ್ಮನೆಗೆ ಆಯ್ಕೆಯಾಗಿ ದಾಖಲೆ ನಿರ್ಮಿಸಿದ್ದಾರೆ. 43 ವರ್ಷದಿಂದ ವಿಧಾನಪರಿಷತ್ ಸದಸ್ಯರಾಗಿರುವ ಅವರು ಸದ್ಯ ಸಭಾಪತಿಯಾಗಿ ಕಾರ್ಯನಿರ್ವಹಿಸುತ್ತಿದ್ದಾರೆ.

ಹೊರಟ್ಟಿ ಅವರು 1980ರಿಂದ ಸ್ಪರ್ಧಿಸಿದ ಚುನಾವಣೆಗಳಲ್ಲಿ ಜಯಗಳಿಸಿದ ಅಂಕಿ ಸಂಖ್ಯೆ ಹಾಗೂ ಇನ್ನಿತರ ಮಾಹಿತಿಯನ್ನು ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ನ 2024ರ ಆವೃತ್ತಿಯಲ್ಲಿ ಪ್ರಕಟಿಸಲಾಗಿದೆ. ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ಭಾರತೀಯರ ವಿಶ್ವದಾಖಲೆಯನ್ನು ದಾಖಲು ಮಾಡುವ ಕೆಲಸ ಮಾಡಲಾಗುತ್ತದೆ. ಈ ಮೂಲಕ ಭಾರತೀಯರ ಸಾಧನೆಯನ್ನು ವಿಶ್ವದ ಮುಂದಿಡುವ ಕೆಲಸ ಆಗುತ್ತದೆ.

ಐತಿಹಾಸಿಕ ದಾಖಲೆ: ಹೊರಟ್ಟಿ ಅವರು ಶಿಕ್ಷಕರ ಕ್ಷೇತ್ರದಿಂದ ಪರಿಷತ್ ಪ್ರವೇಶಿಸಿ ಬುಧವಾರಕ್ಕೆ 43 ವರ್ಷ 201 ದಿನಗಳಾಗಿವೆ. ಇದೊಂದು ಐತಿಹಾಸಿಕ ದಾಖಲೆ. ಇಷ್ಟೊಂದು ಸುದೀರ್ಘ ಚುನಾವಣಾ ರಾಜಕಾರಣವನ್ನು ಬೇರೆ ಯಾರು ಮಾಡಿಲ್ಲ, ಈಗಾಗಲೇ (2022ರಲ್ಲಿ) ಲಂಡನ್ನಿನ ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ಹೊರಟ್ಟಿ ಹೆಸರಿನಲ್ಲಿ ಈ ಸುದೀರ್ಘ ಗೆಲುವಿನ ದಾಖಲೆ ದಾಖಲಾಗಿದೆ.

ಭಾರತೀಯ ಚುನಾವಣಾ ಆಯೋಗದಲ್ಲೂ ಇವರ ಸುದೀರ್ಘ ಸೇವಾ ಅವಧಿ ದಾಖಲೆಗಳು ಸಾಂಖ್ಯಿಕ ಇಲಾಖೆಯಲ್ಲಿ ದಾಖಲೀಕರಣಗೊಂಡು ಗೆಜೆಟ್‌ನಲ್ಲೂ ಪ್ರಕಟಗೊಂಡಿದೆ. ಇದೀಗ ಲಿಮ್ಕಾ ಬುಕ್‌ಗೂ ಇವರ ಸುದೀರ್ಘ ಗೆಲುವಿನ ದಾಖಲೆ ಸೇರ್ಪಡೆಯಾಗಿರುವುದು ಶಿಕ್ಷಕರು ಹಾಗೂ ಅವರ ಅಭಿಮಾನಿ ಬಳಗದಲ್ಲಿ ಸಂತಸವನ್ನುಂಟು ಮಾಡಿದೆ. ಹೊರಟ್ಟಿಯವರು ತಮ್ಮ ಸುದೀರ್ಘ ರಾಜಕೀಯ ಜೀವನದಲ್ಲಿ ಗ್ರಾಮೀಣಾಭಿವೃದ್ಧಿ, ಮಾಹಿತಿ ತಂತ್ರಜ್ಞಾನ, ಶಿಕ್ಷಣ ಸಚಿವರಾಗಿ ಕಾರ್ಯನಿರ್ವಹಿಸಿದ್ದಾರೆ. ಇದೀಗ ಸಭಾಪತಿಯಾಗಿ ಮೇಲ್ಮನೆಯನ್ನು ಮುನ್ನಡೆಸುತ್ತಿದ್ದಾರೆ.

# ಹೊರಟ್ಟಿಗೆ ಲಿಮ್ಕಾ ದಾಖಲೆ ಗರಿ

ಹುಬ್ಬಳ್ಳಿ: ನಾಲ್ಕು ದಶಕಗಳಿಂದ ಸಾರ್ವಜನಿಕ ಹಾಗೂ ಶೈಕ್ಷಣಿಕ ವಲಯದಲ್ಲಿ ಅಪ್ರತಿಮ ಸಾಧನೆಗೈದ ಏಕೈಕ ಕನ್ನಡಿಗ ಹಾಗೂ ಒಂದೇ ಕ್ಷೇತ್ರದಿಂದ ಸತತ ಎಂಟು ಬಾರಿ ಆಯ್ಕೆಯಾಗಿ ವಿಶ್ವ ದಾಖಲೆ ನಿರ್ಮಿಸಿರುವ ಸಭಾಪತಿ



ಬಸವರಾಜ ಹೊರಟ್ಟಿ ಲಿಮ್ಕಾ ಬುಕ್ ಆಫ್ ರೆಕಾಡ್ಸ್‌ಗೆ ಸೇರ್ಪಡೆಯಾಗಿದ್ದಾರೆ.

ಕಳೆದ 43 ವರ್ಷಗಳಿಂದ ವಿಧಾನ ಪರಿಷತ್‌ನಲ್ಲಿ ಶಿಕ್ಷಕರ ಹಿತ ಕಾಯುವಲ್ಲಿ ಶ್ರಮಿಸುತ್ತಿರುವ ಬಸವರಾಜ ಹೊರಟ್ಟಿ ಮುಡಿಗೆ ಮತ್ತೊಂದು ದಾಖಲೆ ಸೇರಿದಂತಾಗಿದೆ.

» **ಒಂದೇ ಕ್ಷೇತ್ರದಿಂದ ಸತತ 8 ಬಾರಿ ಆಯ್ಕೆ**

ಭಾರತದಲ್ಲಿ ಪ್ರಕಟವಾದ 2024ನೇ ಸಾಲಿನ ವಾರ್ಷಿಕ ಪುಸ್ತಕದಲ್ಲಿ ಹೊರಟ್ಟಿ ಅವರ ಐತಿಹಾಸಿಕ ದಾಖಲೆಗಳನ್ನು ಪ್ರಕಟಿಸಲಾಗಿದೆ. ಈ ಬಾರಿಯ ಪುಸ್ತಕದಲ್ಲಿ ಸಿಕ್ಕಿಂ ಮಾಜಿ ಮುಖ್ಯಮಂತ್ರಿ ಪವನ್‌ಕುಮಾರ್ 24 ವರ್ಷ 165 ದಿನ ಮುಖ್ಯಮಂತ್ರಿಯಾಗಿ ಸಲ್ಲಿಸಿದ ಸೇವಾ ಅವಧಿ, ಪಶ್ಚಿಮ ಬಂಗಾಳದ ಮಾಜಿ ಸಿಎಂ ಜ್ಯೋತಿ ಬಸು ಅವರ 23 ವರ್ಷ 137
ದಿನಗಳ ಅವಧಿಯನ್ನು ದಾಖಲಿಸಲಾಗಿದೆ. ಬಸವರಾಜ ಹೊರಟ್ಟಿ 1980ರಿಂದ
ಸ್ಪರ್ಧಿಸಿದ ಎಲ್ಲ ಚುನಾವಣೆಗಳಲ್ಲಿ ಜಯಗಳಿಸಿದ ಅಂಕಿ ಸಂಖ್ಯೆ, ಇತರ ಮಾಹಿತಿ
ಪ್ರಕಟಿಸಲಾಗಿದೆ. ಹೊರಟ್ಟಿ ಅವರಿಗೆ ಈಗಾಗಲೆ ಲಂಡನ್‌ನ ವರ್ಲ್ಡ್ ಬುಕ್
ಆಫ್ ರೆಕಾರ್ಡ್ಸ್ ದಾಖಲೆ ಗರಿ 2022ರಲ್ಲಿ ದೊರಕಿದೆ. ಭಾರತದ ಚುನಾವಣಾ
ಆಯೋಗದಲ್ಲಿ ಇವರ ಸುದೀರ್ಘ ಸೇವಾ ಅವಧಿಯ ದಾಖಲೆಗಳು ಅಂಕಿ
ಸಂಖ್ಯಾ ಇಲಾಖೆಯಲ್ಲಿ ದಾಖಲಿಕರಣಗೊಂಡು ಗೆಜೆಟ್‌ನಲ್ಲಿ ಪ್ರಕಟವಾಗಿವೆ.

# ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ಸೇರಿದ ಹೊರಟ್ಟಿ ಗೆಲುವಿನ ದಾಖಲೆ !

## 1980 ರಿಂದ ಸತತ ಎಂಟು ಬಾರಿ ಗೆಲುವು ದಾಖಲು

## ಪಶ್ಚಿಮ ಶಿಕ್ಷಕರ ಕ್ಷೇತ್ರದಿಂದ ಮೇಲ್ಮನೆಗೆ ಆಯ್ಕೆ ಹಿನ್ನೆಲೆ

■ **ಉದಯವಾಣಿ ಸಮಾಚಾರ**



**ಹುಬ್ಬಳ್ಳಿ:** ಪಶ್ಚಿಮ ಶಿಕ್ಷಕರ ಕ್ಷೇತ್ರದಿಂದ ವಿಧಾನ ಪರಿಷತ್‌ಗೆ ಸತತ ಎಂಟು ಬಾರಿ ಆಯ್ಕೆಯಾಗುವ ಮೂಲಕ ದಾಖಲೆ ಬರೆದಿರುವ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರ ಸಾಧನೆ 2024ನೇ ಸಾಲಿನ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ದಾಖಲಾಗಿದೆ.

1980 ರಿಂದ ಇಲ್ಲಿಯವರೆಗೆ ಪಶ್ಚಿಮ ಶಿಕ್ಷಕರ ಕ್ಷೇತ್ರದಿಂದ ಸ್ಪರ್ಧಿಸಿ ಸತತ ಎಂಟು ಬಾರಿ ಗೆಲುವು ಸಾಧಿಸುವ ಮೂಲಕ ಕರ್ನಾಟಕ ವಿಧಾನ ಪರಿಷತ್ ಸದಸ್ಯರಾಗಿ 43 ವರ್ಷ 201 ದಿನಗಳಾಗಿದ್ದು ಒಂದೇ ಕ್ಷೇತ್ರದಿಂದ ಸತತ ಎಂಟು ಬಾರಿ ಆಯ್ಕೆ ಹಾಗೂ ಸುದೀರ್ಘ ಅವಧಿಗೆ ವಿಧಾನ ಪರಿಷತ್ ಸದಸ್ಯರಾಗಿರುವುದು ದೇಶದಲ್ಲಿಯೇ ಇದೇ ಮೊದಲಾಗಿದೆ. ಹೊರಟ್ಟಿ ಅವರ ಜಯದ ಅಂಕಿ-ಅಂಶಗಳು, ಇನ್ನಿತರ ಮಾಹಿತಿಗಳನ್ನು 2024ನೇ ಸಾಲಿನ ಲಿಮ್ಕಾ ಬುಕ್ ರೆಕಾರ್ಡ್ಸ್‌ನಲ್ಲಿ ಪ್ರಕಟಿಸಲಾಗಿದೆ.

ಸಭಾಪತಿ ಹೊರಟ್ಟಿ ಅವರು 2022ರಲ್ಲಿ ಲಂಡನ್‌ನ ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ಒಂದೇ ಕ್ಷೇತ್ರದಿಂದ ಸತತ ಎಂಟು ಬಾರಿ ಆಯ್ಕೆಯಾದ ದಾಖಲೆ ಸೇರ್ಪಡೆಯಾಗಿತ್ತು. ಜತೆಗೆ ಭಾರತದ ಚುನಾವಣಾ ಆಯೋಗದಲ್ಲಿ ಇವರ ಸುದೀರ್ಘ ಸೇವಾ ಅವಧಿಯ ದಾಖಲೆಗಳು ಅಂಕಿ ಸಂಖ್ಯಾ ಇಲಾಖೆಯಲ್ಲಿ ದಾಖಲೀಕರಣಗೊಂಡು ಗೆಜೆಟ್‌ನಲ್ಲಿ ಪ್ರಕಟವಾಗಿದೆ.


ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ಸಿಕ್ಕಿಂ ರಾಜ್ಯದ ಮಾಜಿ ಮುಖ್ಯಮಂತ್ರಿ ಪವನ್ ಕುಮಾರ ಅವರು 24 ವರ್ಷ 165 ದಿನಗಳವರೆಗೆ ಮುಖ್ಯಮಂತ್ರಿ ಆಗಿ ಸೇವೆ ಸಲ್ಲಿಸಿರುವುದು ಹಾಗೂ ಪಶ್ಚಿಮ ಬಂಗಾಲದ ಮಾಜಿ ಮುಖ್ಯಮಂತ್ರಿ ಜ್ಯೋತಿ ಬಸು ಅವರು 23 ವರ್ಷ 137 ದಿನಗಳವರೆಗೆ ಸಿಎಂ ಆಗಿ ಸೇವೆ ಸಲ್ಲಿಸಿದ ದಾಖಲೆಯೂ ನಮೂದಾಗಿದೆ.

# ಲಿಮ್ಕಾ ದಾಖಲೆಗೆ ಹೊರಟ್ಟಿ

ಪ್ರಜಾವಾಣಿ ವಾರ್ತೆ

ದೀರ್ಘಾವಧಿ ಪ್ರತಿನಿಧಿ

ಬೆಂಗಳೂರು: ಒಂದೇ ಕ್ಷೇತ್ರದಿಂದ ಸತತವಾಗಿ ಎಂಟನೇ ಸಲ ವಿಧಾನ ಪರಿಷತ್‌ಗೆ ಆಯ್ಕೆಯಾಗಿ ದಾಖಲೆ ನಿರ್ಮಿಸಿರುವ



ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರ ಹೆಸರು ಲಿಮ್ಕಾ ವಿಶ್ವ ದಾಖಲೆ ಪುಸ್ತಕಕ್ಕೆ ಸೇರಿದೆ.

ಭಾರತದ ರಾಜಕೀಯಕ್ಕೆ ಸಂಬಂಧಿಸಿದಂತೆ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ಸಂಸ್ಥೆಯು ಪ್ರಕಟಿಸಿರುವ ಪುಸ್ತಕದಲ್ಲಿ ದೀರ್ಘಾವಧಿಗೆ ಚುನಾಯಿತ ಪ್ರತಿನಿಧಿಗಳಾಗಿ ಕಾರ್ಯನಿರ್ವಹಿಸಿರುವ ಮೂವರು ರಾಜಕಾರಣಿಗಳ ಹೆಸರುಗಳನ್ನು ಪ್ರಕಟಿಸಲಾಗಿದೆ.

ಹೊರಟ್ಟಿ ಅವರು 1980ರಿಂದ ವಿಧಾನ ಪರಿಷತ್ ಸದಸ್ಯರಾಗಿದ್ದಾರೆ. ಬುಧವಾರದವರೆಗೆ 43 ವರ್ಷ 201 ದಿನಗಳ ಕಾಲ ಒಂದೇ ಕ್ಷೇತ್ರದ ಪ್ರತಿನಿಧಿಯಾಗಿದ್ದಾರೆ. ಈ ದಾಖಲೆ ನಿರ್ಮಿಸಿರುವುದಕ್ಕಾಗಿ ಅವರ ಹೆಸರನ್ನು ಲಿಮ್ಕಾ ದಾಖಲೆ ಪುಸ್ತಕದಲ್ಲಿ ಸೇರಿಸಲಾಗಿದೆ.

24 ವರ್ಷ 165 ದಿನಗಳ ಕಾಲ ಸಿಕ್ಕಿಂ ರಾಜ್ಯದ ಮುಖ್ಯಮಂತ್ರಿಯಾಗಿದ್ದ ಪವನ್ ಕುಮಾರ್ ಮತ್ತು 23 ವರ್ಷ 137 ದಿನಗಳ ಕಾಲ ಪಶ್ಚಿಮ ಬಂಗಾಳ ರಾಜ್ಯದ ಮುಖ್ಯಮಂತ್ರಿಯಾಗಿದ್ದ ಜ್ಯೋತಿ ಬಸು ಅವರ ಹೆಸರುಗಳೂ ಲಿಮ್ಕಾ ದಾಖಲೆ ಪುಸ್ತಕದಲ್ಲಿವೆ.

# ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ಗೆ ಸಭಾಪತಿ ಹೊರಟ್ಟಿ

■ **ವಿಕ ಸುದ್ದಿಲೋಕ** ಹುಬ್ಬಳ್ಳಿ



ನಾಲ್ಕು ದಶಕಗಳಿಂದ ಸಾರ್ವಜನಿಕ ಮತ್ತು ಶೈಕ್ಷಣಿಕ ವಲಯದಲ್ಲಿ ಅಪ್ರತಿಮ ಸಾಧನೆಗೈದ ಏಕೈಕ ಕನ್ನಡಿಗ ಹಾಗೂ ಒಂದೇ ಕ್ಷೇತ್ರದಿಂದ ಸತತ 8 ಬಾರಿ ಆಯ್ಕೆಯಾದ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ದಾಖಲೆಗೆ ಪಾತ್ರರಾಗಿದ್ದಾರೆ.

ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ಭಾರತದಲ್ಲಿ ಪ್ರಕಟಿಸಿದ 2024ನೇ ಸಾಲಿನ ವಾರ್ಷಿಕ ಪುಸ್ತಕದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರ ಐತಿಹಾಸಿಕ ದಾಖಲೆಗಳನ್ನು ದಾಖಲಿಸಲಾಗಿದೆ.

ಸಿಕ್ಕಿಂ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಪವನ್ ಕುಮಾರ್ 24 ವರ್ಷ 165 ದಿನ ಮುಖ್ಯಮಂತ್ರಿಗಳಾಗಿ ಸಲ್ಲಿಸಿದ ಸೇವಾ ಅವಧಿಯನ್ನು ಹಾಗೂ ಪಶ್ಚಿಮ ಬಂಗಾಳದ ಮಾಜಿ ಮುಖ್ಯಮಂತ್ರಿಗಳಾದ ಜ್ಯೋತಿ ಬಸು 23 ವರ್ಷ 137 ದಿನ ಮುಖ್ಯಮಂತ್ರಿಗಳಾದ ಅವಧಿಯನ್ನು ದಾಖಲಿಸಲಾಗಿದೆ.


ಹೊರಟ್ಟಿ 1980ರಿಂದ ಸ್ಪರ್ಧಿಸಿದ ಎಲ್ಲ ಚುನಾವಣೆಗಳಲ್ಲಿ ಜಯಗಳಿಸಿದ ಅಂಕಿ ಸಂಖ್ಯೆ, ಸಂಗತಿಗಳು ಹಾಗೂ ಇನ್ನಿತರ ಮಾಹಿತಿ ಪ್ರಕಟಿಸಲಾಗಿದೆ. ಹೊರಟ್ಟಿ ಅವರು ವಿಧಾನ ಪರಿಷತ್ ಪ್ರವೇಶಿಸಿ ಇಂದಿಗೆ 43 ವರ್ಷ 201 ದಿನಗಳಾದವು.

ಇದೊಂದು ದೇಶದ ಇತಿಹಾಸದಲ್ಲಿಯೇ ಐತಿಹಾಸಿಕ ದಾಖಲೆ. ಇಷ್ಟೊಂದು ಸುದೀರ್ಘ ಚುನಾವಣಾ ಅವಧಿಯ ರಾಜಕಾರಣವನ್ನು ಮತ್ತೊಬ್ಬರು ದೇಶದ ಇತಿಹಾಸದಲ್ಲಿ ಮಾಡಿಲ್ಲ. ಈಗಾಗಲೇ ಹೊರಟ್ಟಿ ಅವರಿಗೆ ಲಂಡನ್ನಿನ ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್ ದಾಖಲೆ ಗರಿ 2022ರಲ್ಲಿ ಸಂದಿದೆ.

ಶಿಕ್ಷಕರೊಬ್ಬರು ಶಿಕ್ಷಕರ ಪ್ರತಿನಿಧಿಯಾಗಿ, ಹಲವು ಖಾತೆಗಳ ಸಚಿವರಾಗಿ, 3ನೇ ಬಾರಿ ಸಭಾಪತಿಗಳಾಗಿ ಸೇವೆ ಸಲ್ಲಿಸುತ್ತಿರುವದು ಇತಿಹಾಸ. ಹೊರಟ್ಟಿ ನಾಡಿನ ಶಿಕ್ಷಕ ಸಮೂಹದ ಸ್ವಾಭಿಮಾನದ ಸಂಕೇತ. ಅವರ ಸಾಧನೆಯನ್ನು ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ನಲ್ಲಿಪ್ರಕಟಿಸಿದ್ದು ಅವರ ಹಿತೈಷಿಗಳು, ಅಭಿಮಾನಿಗಳು ಹಾಗೂ ಶಿಕ್ಷಕ ಸಮೂಹಕ್ಕೆ ಹರ್ಷ ತಂದಿದೆ.

# ಪರಿಷತ್‌ಗೆ ಸತತ 8 ಬಾರಿ ಆಯ್ಕೆ ; ಹೊರಟ್ಟಿ ಮುಡಿಗೆ ಲಿಮ್ಕಾ ಬುಕ್ ದಾಖಲೆ ಗರಿ

**ಬೆಂಗಳೂರು:** ಕಳೆದ ನಾಲ್ಕು ದಶಕಗಳಿಗಿಂತಲೂ ಹೆಚ್ಚು ಕಾಲ ಕರ್ನಾಟಕದ ಸಾರ್ವಜನಿಕ ಹಾಗೂ ಶೈಕ್ಷಣಿಕ ವಲಯದಲ್ಲಿ ಅಪ್ರತಿಮ ಸಾಧನೆಗೈದ ಏಕೈಕ ಕನ್ನಡಿಗ ಹಾಗೂ ಒಂದೇ ಕ್ಷೇತ್ರದಿಂದ ಸತತ ಎಂಟು ಬಾರಿ ಆಯ್ಕೆಯಾಗಿ ವಿಶ್ವ ದಾಖಲೆ ನಿರ್ಮಿಸಿ ಕಳೆದ 43 ವರ್ಷಗಳಿಂದ ವಿಧಾನ ಪರಿಷತ್ತಿನಲ್ಲಿ ಶಿಕ್ಷಕರ ಹಿತ ಕಾಯುವಲ್ಲಿ ಶ್ರಮಿಸುತ್ತಿರುವ ಸಭಾಪತಿ ಬಸವರಾಜ ಹೊರಟ್ಟಿ ಅವರ ಮುಡಿಗೆ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ಸಂದಿದೆ.



1990ರಲ್ಲಿ ಆರಂಭಗೊಂಡ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ಸಂಸ್ಥೆ ಭಾರತೀಯರ ವಿಶ್ವ ದಾಖಲೆಗಳನ್ನು ದಾಖಲಿಸುವ ಸಂಸ್ಥೆಯಾಗಿದೆ. ಭಾರತದಲ್ಲಿ ಪ್ರಕಟವಾದ 2024ನೇ ಸಾಲಿನ ವಾರ್ಷಿಕ ಪುಸ್ತಕದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರ ಐತಿಹಾಸಿಕ ದಾಖಲೆಗಳನ್ನು ದಾಖಲಿಸಿ ಪ್ರಕಟಿಸಲಾಗಿದೆ.

ಈ ಬಾರಿಯ ವಾರ್ಷಿಕ ಪುಸ್ತಕದಲ್ಲಿ ಸಿಕ್ಕಿಂ ರಾಜ್ಯದ ಮಾಜಿ ಮುಖ್ಯಮಂತ್ರಿ ಪವನ್ ಕುಮಾರ್ ಅವರು 24 ವರ್ಷ 165 ದಿನಗಳ ಕಾಲ ಮುಖ್ಯಮಂತ್ರಿಯಾಗಿ ಸಲ್ಲಿಸಿದ ಸೇವಾ ಅವಧಿ ದಿನಗಳನ್ನು ದಾಖಲಿಸಲಾಗಿದೆ. ಜೊತೆಗೆ ಪಶ್ಚಿಮ ಬಂಗಾಳದ ಮಾಜಿ ಮುಖ್ಯಮಂತ್ರಿ ಜ್ಯೋತಿ ಬಸು ಅವರ 23 ವರ್ಷ 137 ದಿನಗಳ ಕಾಲ ಮುಖ್ಯಮಂತ್ರಿ ಅವಧಿಯನ್ನು ದಾಖಲಿಸಲಾಗಿದೆ. ಸಭಾಪತಿ ಬಸವರಾಜ ಹೊರಟ್ಟಿ ಅವರು 1980 ರಿಂದ ಸ್ಪರ್ಧಿಸಿದ ಎಲ್ಲ ಚುನಾವಣೆಗಳಲ್ಲಿ ಜಯಗಳಿಸಿದ ಅಂಕಿ ಸಂಖ್ಯೆಗಳು ಹಾಗೂ ವಿಸ್ತೃತ ಮಾಹಿತಿಯನ್ನು ನೋಡುವುದಾದರೆ, ಬಸವರಾಜ ಹೊರಟ್ಟಿಯವರು ಇಲ್ಲಿಯವರೆಗೆ ಎಂಟು ಬಾರಿ ಗೆಲುವನ್ನು ತಮ್ಮದಾಗಿಸಿಕೊಳ್ಳುವ ಮೂಲಕ ಐತಿಹಾಸಿಕ ದಾಖಲೆಗೆ ಪಾತ್ರರಾಗಿದ್ದಾರೆ.

ಅವರು ವಿಧಾನ ಪರಿಷತ್ ಪ್ರವೇಶಿಸಿ ಇಂದಿಗೆ 43 ವರ್ಷ 201 ದಿನಗಳಾದವು. ಭಾರತ ದೇಶದ ಇತಿಹಾಸದಲ್ಲಿಯೇ ಐತಿಹಾಸಿಕ ದಾಖಲೆ. ಇಂತಹದೊಂದು ಸುದೀರ್ಘ ಚುನಾವಣಾ ಅವಧಿಯ ರಾಜಕಾರಣವನ್ನು ಮತ್ತೊಬ್ಬರು ದೇಶದ ಇತಿಹಾಸದಲ್ಲಿ ಮಾಡಿಲ್ಲ. ಇಂತಹ ದಾಖಲೆಯನ್ನು ಹಿಂದೆಯೂ ಯಾರು ಮಾಡಿಲ್ಲ ಬಹುಶಃ ಮುಂದೆಯೂ ಯಾರು ಮಾಡಲು ಸಾಧ್ಯವಿಲ್ಲ ಎನಿಸುತ್ತದೆ.

ಈಗಾಗಲೇ ಸಭಾಪತಿ ಬಸವರಾಜ ಹೊರಟ್ಟಿ ಅವರ ಹೆಸರು ಹಲವಾರು ದಾಖಲೆಗಳಲ್ಲಿ ನಮೂದಾಗಿದ್ದು, ಪ್ರಮುಖವಾಗಿ ಈಗಾಗಲೇ ಲಂಡನ್ನಿನ ವರ್ಲ್ಡ್ ಬುಕ್ ಆಫ್ ದಾಖಲೆ ಗರಿ 2022 ರಲ್ಲಿ ದೊರಕಿದೆ. ಭಾರತದ ಚುನಾವಣಾ ಆಯೋಗದಲ್ಲಿ ಇವರ ಸುದೀರ್ಘ ಸೇವಾ ಅವಧಿಯ ದಾಖಲೆಗಳು ಅಂಕಿ ಸಂಖ್ಯಾ ಇಲಾಖೆಯಲ್ಲಿ ದಾಖಲೀಕರಣಗೊಂಡು ಗೆಜೆಟ್‌ನಲ್ಲಿ ಪ್ರಕಟವಾಗಿದೆ. ಶಿಕ್ಷಕರೊಬ್ಬರು ಶಿಕ್ಷಕರ ಪ್ರತಿನಿಧಿಯಾಗಿ ಹಲವಾರು ಖಾತೆಗಳ ಸಚಿವರಾಗಿ, ಮೂರನೇ ಬಾರಿ ಸಭಾಪತಿಗಳಾಗಿ ಸೇವೆ ಸಲ್ಲಿಸುತ್ತಿರುವುದು ಇತಿಹಾಸ. ಬಸವರಾಜ ಹೊರಟ್ಟಿ ಅವರು ನಾಡಿನ ಶಿಕ್ಷಕ ಸಮುದಾಯದ ಸ್ವಾಭಿಮಾನದ ಸಂಕೇತ. ಇವರ ಸಾಧನೆಯನ್ನು ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ನಲ್ಲಿ ಪ್ರಕಟಿಸಿದ್ದು ಅವರ ಹಲವಾರು ಹಿತೈಷಿಗಳಿಗೆ, ಅಭಿಮಾನಿಗಳಿಗೆ ಹಾಗೂ ಶಿಕ್ಷಕರ ಸಮುದಾಯಕ್ಕೆ ಹರ್ಷ ತಂದಿದೆ.

ಉದಯಕಾಲ
ಕನ್ನಡಿಗರ ಜೀವಾಳ

# ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮುಡಿಗೆ ಮತ್ತೊಂದು ಗರಿ

ಮೊದಲನೇ ಪುಟದಿಂದ....

ಪಾತ್ರರಾಗಿದ್ದಾರೆ.

★ಸಭಾಪತಿ ಬಸವರಾಜ ಹೊರಟ್ಟಿ ಅವರು ವಿಧಾನ ಪರಿಷತ್ ಪ್ರವೇಶಿಸಿ ಇಂದಿಗೆ 43 ವರ್ಷ 201 ದಿನಗಳಾದವು.

ಭಾರತ ದೇಶದ ಇತಿಹಾಸದಲ್ಲಿಯೇ ಇದು ಐತಿಹಾಸಿಕ ದಾಖಲೆಯಾಗಿದೆ. ಇಷ್ಟೊಂದು ಸುದೀರ್ಘ ಚುನಾವಣಾ ಅವಧಿಯ ರಾಜಕಾರಣವನ್ನು ಮತ್ತೊಬ್ಬರು ದೇಶದ ಇತಿಹಾಸದಲ್ಲಿ ಮಾಡಿಲ್ಲ. ಇಂತಹ ದಾಖಲೆಯನ್ನು ಹಿಂದೆಯೂ ಯಾರು ಮಾಡಿಲ್ಲ ಬಹುಶ: ಮುಂದೆಯೂ ಯಾರು ಮಾಡಲು ಸಾಧ್ಯವಿಲ್ಲ ಎನಿಸುತ್ತದೆ.

★ ಈಗಾಗಲೇ ಸಭಾಪತಿ ಬಸವರಾಜ ಹೊರಟ್ಟಿ ಅವರ ಹೆಸರು ಹಲವಾರು ದಾಖಲೆಗಳಲ್ಲಿ ನಮೂದಾಗಿದ್ದು, ಪ್ರಮುಖವಾಗಿ ಈಗಾಗಲೇ ಲಂಡನ್ನಿನ ವರ್ಲ್ಡ್ ಬುಕ್ ಆಫ್ ದಾಖಲೆ ಗರಿ 2022 ರಲ್ಲಿ ದೊರಕಿದೆ.

★ ಭಾರತದ ಚುನಾವಣಾ ಆಯೋಗದಲ್ಲಿ ಇವರ ಸುದೀರ್ಘ ಸೇವಾ ಅವಧಿಯ ದಾಖಲೆಗಳು ಅಂಕಿ ಸಂಖ್ಯಾ ಇಲಾಖೆಯಲ್ಲಿ ದಾಖಲಿಕರಣಗೊಂಡು ಗೆಜೆಟ್‌ನಲ್ಲಿ ಪ್ರಕಟವಾಗಿವೆ.

ಶಿಕ್ಷಕರೊಬ್ಬರು ಶಿಕ್ಷಕರ ಪ್ರತಿನಿಧಿಯಾಗಿ ಹಲವಾರು ಖಾತೆಗಳ ಸಚಿವರಾಗಿ ಮೂರನೇ ಬಾರಿ ಸಭಾಪತಿಗಳಾಗಿ ಸೇವೆ ಸಲ್ಲಿಸುತ್ತಿರುವುದು ಇತಿಹಾಸ. ಬಸವರಾಜ ಹೊರಟ್ಟಿ ಅವರು ನಾಡಿನ ಶಿಕ್ಷಕ ಸಮೂಹದ ಸ್ವಾಭಿಮಾನದ ಸಂಕೇತ. ಇವರ ಸಾಧನೆಯನ್ನು ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ನಲ್ಲಿ ಪ್ರಕಟಿಸಿದ್ದು ಅವರ ಹಲವಾರು ಹಿತೈಷಿಗಳಿಗೆ ಅಭಿಮಾನಿಗಳಿಗೆ ಶಿಕ್ಷಕ ಸಮೂಹಕ್ಕೆ ಹರ್ಷ ತಂದಿದೆ.

1990ರಲ್ಲಿ ಆರಂಭಗೊಂಡ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ಸಂಸ್ಥೆ ಭಾರತೀಯರ ವಿಶ್ವ ದಾಖಲೆಗಳನ್ನು ದಾಖಲಿಸುವ ಸಂಸ್ಥೆಯಾಗಿದೆ.

ಉದಯಕಾಲ
ಕನ್ನಡಿಗರ ಜೀವಾಳ

# ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮುಡಿಗೆ ಮತ್ತೊಂದು ಗರಿ


## ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ಗೆ ಹೊರಟ್ಟಿಯವರ ಸಾಧನೆ ಸೇರ್ಪಡೆ

ಉದಯಕಾಲ ನ್ಯೂಸ್

**ಬೆಂಗಳೂರು:** ಕಳೆದ ನಾಲ್ಕು ದಶಕಗಳಿಗಿಂತಲೂ ಹೆಚ್ಚು ಕಾಲ ಕರ್ನಾಟಕದ ಸಾರ್ವಜನಿಕ ಹಾಗೂ ಶೈಕ್ಷಣಿಕ ವಲಯದಲ್ಲಿ ಅಪ್ರತಿಮ ಸಾಧನೆಗೈದ ಏಕೈಕ ಕನ್ನಡಿಗ ಹಾಗೂ ಒಂದೇ ಕ್ಷೇತ್ರದಿಂದ ಸತತ ಎಂಟು ಬಾರಿ ಆಯ್ಕೆಯಾಗಿ ವಿಶ್ವ ದಾಖಲೆ ನಿರ್ಮಿಸಿರುವ ಸಭಾಪತಿ ಬಸವರಾಜ ಹೊರಟ್ಟಿ ಅವರ ಮುಡಿಗೆ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ಗರಿ ಸಹ ಸೇರ್ಪಡೆಯಾಗಿದೆ.

43 ವರ್ಷಗಳಿಂದ ವಿಧಾನ ಪರಿಷತ್ತಿನಲ್ಲಿ ಶಿಕ್ಷಕರ ಹಿತ ಕಾಯುವಲ್ಲಿ ಶ್ರಮಿಸುತ್ತಿರುವ ಹೊರಟ್ಟಿಯವರ ಅವರ ಐತಿಹಾಸಿಕ ದಾಖಲೆಗಳನ್ನು ಲಿಮ್ಕಾ ಬುಕ್ ನಲ್ಲಿ ಪ್ರಕಟಿಸಲಾಗಿದೆ.

ಭಾರತದಲ್ಲಿ ಪ್ರಕಟವಾದ 2024ನೇ ಸಾಲಿನ ವಾರ್ಷಿಕ ಪುಸ್ತಕದಲ್ಲಿ ಸಿಕ್ಕಿಂನ ಮಾಜಿ ಮುಖ್ಯಮಂತ್ರಿ ಪವನ್ ಕುಮಾರ್ ಅವರು 24 ವರ್ಷ 165 ದಿನ ಮುಖ್ಯಮಂತ್ರಿಯಾಗಿ ಸಲ್ಲಿಸಿದ ಸೇವಾ ಅವಧಿ ದಿನಗಳನ್ನು ದಾಖಲಿಸಲಾಗಿದೆ. ಜೊತೆಗೆ ಪಶ್ಚಿಮ



ಬಂಗಾಳದ ಮಾಜಿ ಮುಖ್ಯಮಂತ್ರಿ ಜ್ಯೋತಿ ಬಸು ಅವರ 23 ವರ್ಷ 137 ದಿನ ಮುಖ್ಯಮಂತ್ರಿ ಅವಧಿಯನ್ನು ದಾಖಲಿಸಲಾಗಿದೆ.

ಸಭಾಪತಿ ಬಸವರಾಜ ಹೊರಟ್ಟಿ ಅವರು 1980 ರಿಂದ ಸ್ಪರ್ಧಿಸಿದ ಎಲ್ಲ ಚುನಾವಣೆಗಳಲ್ಲಿ ಜಯಗಳಿಸಿದ ಅಂಕಿ ಸಂಖ್ಯೆಗಳು ಹಾಗೂ ಇನ್ನಿತರ ಮಾಹಿತಿ...

★ಬಸವರಾಜ ಹೊರಟ್ಟಿಯವರು ಇಲ್ಲಿಯವರೆಗೆ ಎಂಟು ಬಾರಿ ಗೆಲುವನ್ನು ತಮ್ಮದಾಗಿಸಿಕೊಳ್ಳುವ ಮೂಲಕ ಐತಿಹಾಸಿಕ ದಾಖಲೆಗೆ

ಪುಟ 07

### ನನ್ನ ಮೇಲಿರುವ ನಂಬಿಕೆಯೇ ಈ ಸಾಧನೆ

ಜೀವನದಲ್ಲಿ ದೊಡ್ಡ ಸಾಧನೆ ಮಾಡಿದಂತಾಗಿದೆ. ಬೆಳಗ್ಗೆಯಿಂದ ಲಕ್ಷಾಂತರ ಮಂದಿ ಅಭಿನಂದನೆ ಸಲ್ಲಿಸಿದ್ದಾರೆ. ಎಂಟು ಬಾರಿ ಸತತವಾಗಿ ಯಾರೂ ಗೆದ್ದು ಬಂದಿಲ್ಲ. ಇದಕ್ಕೆಲ್ಲ ಕಾರಣ ನನ್ನ ಕೇತ್ರದ ನಮ್ಮ ಶಿಕ್ಷಕರು. ಕಳೆದ ಎಂಟು ಅವಧಿಯಿಂದಲೂ ನಂಬಿಕೆ ಇಟ್ಟು ಗೆಲ್ಲಿಸುತ್ತಾ ಬಂದಿದ್ದಾರೆ. ತಂದೆ- ಮಗ-ಮಗಳು ಎರಡು ತಲೆಮಾರಿನವರು ಮತ ನೀಡಿದ್ದಾರೆ. ನಾನು ಸಹ ಅದೇ ನಂಬಿಕೆಯನ್ನು ಉಳಿಸಿಕೊಂಡು ಬಂದಿದ್ದೇನೆ. ಪ್ರಸ್ತುತ ಎಲ್ಲಾ ಶಿಕ್ಷಕರ ಕ್ಷೇತ್ರಗಳು ಸ್ವಲ್ಪ ಕಲುಷಿತಗೊಂಡಿವೆ. ಆದರೆ ನನ್ನ ಕ್ಷೇತ್ರವನ್ನು ಮೊದಲಿನಂತೆ ನಾನು ಕಾಪಾಡಿಕೊಂಡಿದ್ದೇನೆ. ಅಲ್ಲಿ ಯಾವುದೇ ಬದಲಾವಣೆ

ಪುಟ 07

# ಸಭಾಪತಿ ಬಸವರಾಜ ಹೊರಟ್ಟಿಯವರ ಹೆಸರು ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ಸೇರ್ಪಡೆ



**ಕಲ್ಯಾಣವಾಣಿ**

**ಗದಗ ೨೪ :** ಸಭಾಪತಿ ಬಸವರಾಜ ಹೊರಟ್ಟಿ ಅವರ ಮುಡಿಗೆ ಮತ್ತೊಂದು ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ದಾಖಲೆಯ ಗರಿ ಸೇರ್ಪಡೆ. ಕಳೆದ ನಾಲ್ಕು ದಶಕಗಳಿಂದ ಸಾರ್ವಜನಿಕ ಹಾಗೂ ಶೈಕ್ಷಣಿಕ ವಲಯದಲ್ಲಿ ಅಪ್ರತಿಮ ಸಾಧನೆಗೈದ ಏಕೈಕ ಕನ್ನಡಿಗ ಹಾಗೂ ಒಂದೇ ಕ್ಷೇತ್ರದಿಂದ ಸತತ ಎಂಟು ಬಾರಿ ಆಯ್ಕೆಯಾಗಿ ವಿಶ್ವ ದಾಖಲೆ ನಿರ್ಮಿಸಿ ಕಳೆದ ೪೩ ವರ್ಷಗಳಿಂದ ವಿಧಾನ ಪರಿಷತ್ತಿನಲ್ಲಿ ಶಿಕ್ಷಕರ ಹಿತ ಕಾಯುವಲ್ಲಿ ಶ್ರಮಿಸುತ್ತಿರುವ ಸಭಾಪತಿ ಬಸವರಾಜ್ ಹೊರಟ್ಟಿ ಅವರ ಮೂಡಿಗೆ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ದಾಖಲೆಯ ಗರಿ ಸೇರ್ಪಡೆಯಾಗಿದೆ. ೧೯೯೦ರಲ್ಲಿ ಆರಂಭಗೊಂಡ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ಸಂಸ್ಥೆ ಭಾರತೀಯರ ವಿಶ್ವ ದಾಖಲೆಗಳನ್ನು ದಾಖಲಿಸುವ ಸಂಸ್ಥೆಯಾಗಿದೆ. ಭಾರತದಲ್ಲಿ ಪ್ರಕಟವಾದ ೨೦೨೪ನೇ ಸಾಲಿನ ವಾರ್ಷಿಕ ಪುಸ್ತಕದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರ ಐತಿಹಾಸಿಕ ದಾಖಲೆಗಳನ್ನು ದಾಖಲಿಸಿ ಪ್ರಕಟಿಸಲಾಗಿದೆ. ಈ ಬಾರಿಯ ವಾರ್ಷಿಕ ಪುಸ್ತಕದಲ್ಲಿ ಸಿಕ್ಕಿಂ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಪವನ್ ಕುಮಾರ್ ಅವರು ೨೪ ವರ್ಷ ೧೬೫ ದಿನಗಳ ಕಾಲ ಮುಖ್ಯಮಂತ್ರಿಗಳಾಗಿ ಸಲ್ಲಿಸಿದ ಸೇವಾ ಅವಧಿ ದಿನಗಳನ್ನು ದಾಖಲಿಸಲಾಗಿದೆ.

ಜೊತೆಗೆ ಪಶ್ಚಿಮ ಬಂಗಾಳದ ಮಾಜಿ ಮುಖ್ಯಮಂತ್ರಿಗಳಾದ ಜ್ಯೋತಿ ಬಸು ಅವರ ೨೩ ವರ್ಷ ೧೩೮ ದಿನಗಳ ಕಾಲ ಮುಖ್ಯಮಂತ್ರಿಗಳಾದ ಅವಧಿಯನ್ನು ದಾಖಲಿಸಲಾಗಿದೆ.

ಸಭಾಪತಿ ಬಸವರಾಜ್ ಹೊರಟ್ಟಿ ಅವರು ೧೯೮೦ ರಿಂದ ಸ್ಪರ್ಧಿಸಿದ ಎಲ್ಲ ಚುನಾವಣೆಗಳಲ್ಲಿ ಜಯಗಳಿಸಿದ ಅಂಕಿ ಸಂಖ್ಯೆಗಳನ್ನ ಸಂಗತಿಗಳನ್ನ ಹಾಗೂ ಇನ್ನಿತರ ಮಾಹಿತಿಯನ್ನು ಪ್ರಕಟಿಸಿದ್ದಾರೆ. ಹೊರಟ್ಟಿಯವರು ಇಲ್ಲಿಯವರೆಗೆ ಎಂಟು ಬಾರಿ ಗೆಲುವನ್ನ ತಮ್ಮದಾಗಿಸಿಕೊಳ್ಳುವ ಮೂಲಕ ಐತಿಹಾಸಿಕ ದಾಖಲೆಗೆ ಪಾತ್ರರಾಗಿದ್ದಾರೆ.

ಸಭಾಪತಿ ಬಸವರಾಜ್ ಹೊರಟ್ಟಿ ಅವರು ವಿಧಾನ ಪರಿಷತ್ ಪ್ರವೇಶಿಸಿ ಇಂದಿಗೆ ೪೩ ವರ್ಷ ೨೦೧ ದಿನಗಳಾದವು. ಇದೊಂದು ದೇಶದ ಇತಿಹಾಸದಲ್ಲಿಯೇ ಐತಿಹಾಸಿಕ ದಾಖಲೆ. ಇಷ್ಟೊಂದು ಸುದೀರ್ಘ ಚುನಾವಣಾ ಅವಧಿಯ ರಾಜಕಾರಣವನ್ನು ಮತ್ತೊಬ್ಬರು ದೇಶದ ಇತಿಹಾಸದಲ್ಲಿ ಮಾಡಿಲ್ಲ. ಇಂತಹ ದಾಖಲೆಯನ್ನು ಹಿಂದೆಯೂ ಯಾರು ಮಾಡಿಲ್ಲ ಬಹುಶಹ ಮುಂದೆಯೂ ಯಾರು ಮಾಡಲು ಸಾಧ್ಯವಿಲ್ಲ ಎನಿಸುತ್ತದೆ. ಈಗಾಗಲೇ ಸಭಾಪತಿ ಬಸವರಾಜ್ ಹೊರಟ್ಟಿ ಅವರ ಹಲವಾರು ದಾಖಲೆಗಳಲ್ಲಿ ಪ್ರಮುಖವಾಗಿ ಈಗಾಗಲೇ ಲಂಡನ್ನಿನ ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್ ದಾಖಲೆ ಗರಿ ೨೦೨೨ ರಲ್ಲಿ ದೊರಕಿದೆ. ಭಾರತದ ಚುನಾವಣಾ ಆಯೋಗದಲ್ಲಿ ಇವರ ಸುಧೀರ್ಘ ಸೇವಾ ಅವಧಿಯ ದಾಖಲೆಗಳು ಅಂಕಿ ಸಂಖ್ಯಾ ಇಲಾಖೆಯಲ್ಲಿ ದಾಖಲಿಕರಣಗೊಂಡು ಗೆಜೆಟ್ ನಲ್ಲಿ ಪ್ರಕಟವಾಗಿವೆ.

ಶಿಕ್ಷಕರೊಬ್ಬರು ಶಿಕ್ಷಕರ ಪ್ರತಿನಿಧಿಯಾಗಿ ಹಲವಾರು ಖಾತೆಗಳ ಸಚಿವರಾಗಿ ಮೂರನೇ ಬಾರಿ ಸಭಾಪತಿಗಳಾಗಿ ಸೇವೆ ಸುತ್ತಿರುವದು ಇತಿಹಾಸ. ಬಸವರಾಜ್ ಹೊರಟ್ಟಿ ಅವರು ನಾಡಿನ ಶಿಕ್ಷಕ ಸಮೂಹದ ಸ್ವಾಭಿಮಾನದ ಸಂಕೇತ. ಇವರ ಸಾಧನೆಯನ್ನು ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ನಲ್ಲಿ ಪ್ರಕಟಿಸಿದ್ದು ಅವರ ಹಲವಾರು ಹಿತೈಷಿಗಳಿಗೆ ಅಭಿಮಾನಿಗಳಿಗೆ ಶಿಕ್ಷಕ ಸಮೂಹಕ್ಕೆ ಹರ್ಷ ತಂದಿದೆ.

ಬೆಂಗಳೂರು

ಆನಂದ್ ಸಾಗರ್ ಎಸ್. ಪ್ರಧಾನ ಸಂಪಾದಕರು

IS

# ಇಂದು ಸಂಜೆ

ಸ್ಥಳೀಯ ಸುದ್ದಿಗಳ ಸಮಗ್ರ ಚಿತ್ರಣ


INDU SANJE, Kannada evening daily

RNI: KAR/KAN/58071/93

ಬೆಂಗಳೂರು, ಮೈಸೂರು, ಮಂಡ್ಯ, ಹಾಸನ, ಕೋಲಾರ, ಚಿಕ್ಕಬಳ್ಳಾಪುರ, ಚಾಮರಾಜನಗರ, ರಾಮನಗರ, ಹುಬ್ಬಳ್ಳಿಯಿಂದ ಏಕಕಾಲಕ್ಕೆ ಪ್ರಕಟ

Bangalore, Mysore, Mandya, Hassan, Kolar, Chikkaballapur, Chamarajnagara, Ramanagara, Hubballi Published simultaneously

25 Jan 2024



ಸಂಸ್ಥಾಪಕರು


POWERED BY.
KHUSHI HOST™


# ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ಗೆ ಸಭಾಪತಿ ಬಸವರಾಜ ಹೊರಟ್ಟಿ ಸೇರ್ಪಡೆ

## ವಿಧಾನ ಪರಿಷತ್ ಸದಸ್ಯರಾಗಿ 44 ವರ್ಷ ಸೇವೆ

**ಧಾರವಾಡ:** ಕಳೆದ ನಾಲ್ಕು ದಶಕಗಳಿಗಿಂತಲೂ ಹೆಚ್ಚು ಕಾಲ ಕರ್ನಾಟಕದ ಸಾರ್ವಜನಿಕ ಹಾಗೂ ಶೈಕ್ಷಣಿಕ ವಲಯದಲ್ಲಿ ಅಪ್ರತಿಮ ಸಾಧನೆಗೈದ ಏಕೈಕ ಕನ್ನಡಿಗ ಹಾಗೂ ಒಂದೇ ಕ್ಷೇತ್ರದಿಂದ ಸತತ ಎಂಟು ಬಾರಿ ಆಯ್ಕೆಯಾಗಿ ವಿಶ್ವ ದಾಖಲೆ ನಿರ್ಮಿಸಿ ಕಳೆದ 43 ವರ್ಷಗಳಿಂದ ವಿಧಾನ ಪರಿಷತ್ತಿನಲ್ಲಿ ಶಿಕ್ಷಕರ ಹಿತ ಕಾಯುವಲ್ಲಿ ಶ್ರಮಿಸುತ್ತಿರುವ ಸಭಾಪತಿ ಬಸವರಾಜ ಹೊರಟ್ಟಿ ಅವರ ಮುಡಿಗೆ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ದಾಖಲೆಯ ಗರಿ ಸೇರ್ಪಡೆಯಾಗಿದೆ. 1990ರಲ್ಲಿ ಆರಂಭಗೊಂಡ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ಸಂಸ್ಥೆ ಭಾರತೀಯರ ವಿಶ್ವ ದಾಖಲೆಗಳನ್ನು ದಾಖಲಿಸುವ ಸಂಸ್ಥೆಯಾಗಿದೆ.

ಭಾರತದಲ್ಲಿ ಪ್ರಕಟವಾದ 2024ನೇ ಸಾಲಿನ ವಾರ್ಷಿಕ ಪುಸ್ತಕದಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಅವರ ಐತಿಹಾಸಿಕ ದಾಖಲೆಗಳನ್ನು ದಾಖಲಿಸಿ ಪ್ರಕಟಿಸಲಾಗಿದೆ. ಈ ಬಾರಿಯ ವಾರ್ಷಿಕ ಪುಸ್ತಕದಲ್ಲಿ ಸಿಕ್ಕಿಂ ರಾಜ್ಯದ ಮಾಜಿ ಮುಖ್ಯಮಂತ್ರಿಗಳಾದ ಪವನ್ ಕುಮಾರ್ ಅವರು 24 ವರ್ಷ 165 ದಿನಗಳ ಕಾಲ ಮುಖ್ಯಮಂತ್ರಿಗಳಾಗಿ ಸಲ್ಲಿಸಿದ ಸೇವಾ ಅವಧಿ ದಿನಗಳನ್ನು ದಾಖಲಿಸಲಾಗಿದೆ.

ಜೊತೆಗೆ ಪಶ್ಚಿಮ ಬಂಗಾಳದ ಮಾಜಿ ಮುಖ್ಯಮಂತ್ರಿಗಳಾದ ಜ್ಯೋತಿ ಬಸು ಅವರ 23 ವರ್ಷ 137 ದಿನಗಳ ಕಾಲ ಮುಖ್ಯಮಂತ್ರಿಗಳಾದ ಅವಧಿಯನ್ನು ದಾಖಲಿಸಲಾಗಿದೆ.



ಸಭಾಪತಿ ಬಸವರಾಜ ಹೊರಟ್ಟಿ ಅವರು 1980 ರಿಂದ ಸ್ಪರ್ಧಿಸಿದ ಎಲ್ಲ ಚುನಾವಣೆಗಳಲ್ಲಿ ಜಯಗಳಿಸಿದ ಅಂಕಿ ಸಂಖ್ಯೆಗಳು ಹಾಗೂ ವಿಸ್ತೃತ ಮಾಹಿತಿಯನ್ನು ಪ್ರಕಟಿಸಲಾಗಿದೆ. ಬಸವರಾಜ ಹೊರಟ್ಟಿಯವರು ಇಲ್ಲಿಯವರೆಗೆ ಎಂಟು ಬಾರಿ ಗೆಲುವನ್ನು ತಮ್ಮದಾಗಿಸಿಕೊಳ್ಳುವ ಮೂಲಕ ಐತಿಹಾಸಿಕ ದಾಖಲೆಗೆ ಪಾತ್ರರಾಗಿದ್ದಾರೆ. ಸಭಾಪತಿ ಬಸವರಾಜ ಹೊರಟ್ಟಿ ಅವರು ವಿಧಾನ ಪರಿಷತ್ ಪ್ರವೇಶಿಸಿ ಇಂದಿಗೆ 43 ವರ್ಷ 201 ದಿನಗಳಾದವು.

ಭಾರತ ದೇಶದ ಇತಿಹಾಸದಲ್ಲಿಯೇ ಐತಿಹಾಸಿಕ ದಾಖಲೆ. ಇಷ್ಟೊಂದು ಸುದೀರ್ಘ ಚುನಾವಣಾ ಅವಧಿಯ ರಾಜಕಾರಣವನ್ನು ಮತ್ತೊಬ್ಬರು ದೇಶದ ಇತಿಹಾಸದಲ್ಲಿ ಮಾಡಿಲ್ಲ. ಇಂತಹ ದಾಖಲೆಯನ್ನು ಹಿಂದೆಯೂ ಯಾರು ಮಾಡಿಲ್ಲ ಬಹುಶಃ ಮುಂದೆಯೂ ಯಾರು ಮಾಡಲು ಸಾಧ್ಯವಿಲ್ಲ ಎನಿಸುತ್ತದೆ.

ಈಗಾಗಲೇ ಸಭಾಪತಿ ಬಸವರಾಜ ಹೊರಟ್ಟಿ ಅವರ ಹೆಸರು ಹಲವಾರು ದಾಖಲೆಗಳಲ್ಲಿ ನಮೂದಾಗಿದ್ದು, ಪ್ರಮುಖವಾಗಿ ಈಗಾಗಲೇ ಲಂಡನ್ನಿನ ವರ್ಲ್ಡ್ ಬುಕ್ ಆಫ್ ದಾಖಲೆ ಗರಿ 2022 ರಲ್ಲಿ ದೊರಕಿದೆ. ಭಾರತದ ಚುನಾವಣಾ ಆಯೋಗದಲ್ಲಿ ಇವರ ಸುದೀರ್ಘ ಸೇವಾ ಅವಧಿಯ ದಾಖಲೆಗಳು ಅಂಕಿ ಸಂಖ್ಯಾ ಇಲಾಖೆಯಲ್ಲಿ ದಾಖಲೆಗಳೊಂದಿಗೆ ಗೆಜೆಟ್ ನಲ್ಲಿ ಪ್ರಕಟವಾಗಿದೆ. ಶಿಕ್ಷಕರೊಬ್ಬರು ಶಿಕ್ಷಕರ ಪ್ರತಿನಿಧಿಯಾಗಿ ಹಲವಾರು ಖಾತೆಗಳ ಸಚಿವರಾಗಿ ಮೂರನೇ ಬಾರಿ ಸಭಾಪತಿಗಳಾಗಿ ಸೇವೆ ಸಲ್ಲಿಸುತ್ತಿರುವುದು ಇತಿಹಾಸ. ಹೊರಟ್ಟಿ ಅವರು ನಾಡಿನ ಶಿಕ್ಷಕ ಸಮೂಹದ ಸ್ವಾಭಿಮಾನದ ಸಂಕೇತ. ಇವರ ಸಾಧನೆಯನ್ನು ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್ ನಲ್ಲಿ ಪ್ರಕಟಿಸಿದ್ದು ಅವರ ಹಲವಾರು ಹಿತೈಷಿಗಳಿಗೆ ಅಭಿಮಾನಿಗಳಿಗೆ ಶಿಕ್ಷಕ ಸಮೂಹಕ್ಕೆ ಹರ್ಷ ತಂದಿದೆ.

ಒತ್ತಾಯಿಸಿತು. ಬಳಿಕ ಮಾಜಿ ಡಿಸಿಎಂ ಡಾ.ಸಿ.ಎನ್.ಅಶ್ವತ್ಥನಾರಾಯಣ ಮಾತನಾಡಿ, ಚುನಾವಣಾ ಆಯೋಗವು ಬೆಂಗಳೂರಿನ ವಿಧಾನ ಪರಿಷತ್ ಶಿಕ್ಷಕರ ಕ್ಷೇತ್ರಕ್ಕೆ ಫೆಬ್ರವರಿ 16 ರಂದು ಮತದಾನ ನಿಗದಿಪಡಿಸಿದೆ. ಅಂದೇ ರಾಜ್ಯ ಸರ್ಕಾರದ ಬಜೆಟ್ ಮಂಡನೆ ಆಗಲಿದೆ. ಮಾದರಿ ನೀತಿಸಂಹಿತೆ ಮತ್ತು ಜನಪ್ರತಿನಿಧಿ ಕಾಯ್ದೆ ಪ್ರಕಾರ ಇದು ನ್ಯಾಯಬದ್ಧವಲ್ಲ. ಬಜೆಟ್ ಮಂಡನೆ ದಿನವನ್ನು ಮುಂದೂಡಬೇಕು ಎಂದು ಕೋರಿದ್ದೇವೆ. ಸರ್ಕಾರಕ್ಕೆ ಸೂಚಿಸುವುದಾಗಿ ರಾಜ್ಯಪಾಲರೂ ತಿಳಿಸಿದ್ದಾರೆ ಎಂದು ಹೇಳಿದರು.

# ಹೊರಟ್ಟಿಗೆ ಲಿಮ್ಕಾ ದಾಖಲೆ ಗರಿ

**ಹುಬ್ಬಳ್ಳಿ:** ನಾಲ್ಕು ದಶಕಗಳಿಂದ ಸಾರ್ವಜನಿಕ ಹಾಗೂ ಶೈಕ್ಷಣಿಕ ವಲಯದಲ್ಲಿ ಅಪ್ರತಿಮ ಸಾಧನೆಗೈದ ಏಕೈಕ ಕನ್ನಡಿಗ ಹಾಗೂ ಒಂದೇ ಕ್ಷೇತ್ರದಿಂದ ಸತತ ಎಂಟು ಬಾರಿ ಆಯ್ಕೆಯಾಗಿ ವಿಶ್ವ ದಾಖಲೆ ನಿರ್ಮಿಸಿರುವ ಸಭಾಪತಿ ಬಸವರಾಜ ಹೊರಟ್ಟಿ ಲಿಮ್ಕಾ ಬುಕ್ ಆಫ್ ರೆಕಾರ್ಡ್ಸ್‌ಗೆ ಸೇರ್ಪಡೆಯಾಗಿದ್ದಾರೆ.



ಕಳೆದ 43 ವರ್ಷಗಳಿಂದ ವಿಧಾನ ಪರಿಷತ್‌ನಲ್ಲಿ ಶಿಕ್ಷಕರ ಹಿತ ಕಾಯುವಲ್ಲಿ ಶ್ರಮಿಸುತ್ತಿರುವ ಬಸವರಾಜ ಹೊರಟ್ಟಿ ಮುಡಿಗೆ ಮತ್ತೊಂದು ದಾಖಲೆ ಸೇರಿದಂತಾಗಿದೆ.

» ಒಂದೇ ಕ್ಷೇತ್ರದಿಂದ ಸತತ 8 ಬಾರಿ ಆಯ್ಕೆ

ಭಾರತದಲ್ಲಿ ಪ್ರಕಟವಾದ 2024ನೇ ಸಾಲಿನ ವಾರ್ಷಿಕ ಪುಸ್ತಕದಲ್ಲಿ ಹೊರಟ್ಟಿ ಅವರ ಐತಿಹಾಸಿಕ ದಾಖಲೆಗಳನ್ನು ಪ್ರಕಟಿಸಲಾಗಿದೆ. ಈ ಬಾರಿಯ ಪುಸ್ತಕದಲ್ಲಿ ಸಿಕ್ಕಿಂ ಮಾಜಿ ಮುಖ್ಯಮಂತ್ರಿ ಪವನ್‌ಕುಮಾರ್ 24 ವರ್ಷ 165 ದಿನ ಮುಖ್ಯಮಂತ್ರಿಯಾಗಿ ಸಲ್ಲಿಸಿದ ಸೇವಾ ಅವಧಿ, ಪಶ್ಚಿಮ ಬಂಗಾಳದ ಮಾಜಿ ಸಿಎಂ ಜ್ಯೋತಿ ಬಸು ಅವರ 23 ವರ್ಷ 137 ದಿನಗಳ ಅವಧಿಯನ್ನು ದಾಖಲಿಸಲಾಗಿದೆ. ಬಸವರಾಜ ಹೊರಟ್ಟಿ 1980ರಿಂದ ಸ್ಪರ್ಧಿಸಿದ ಎಲ್ಲ ಚುನಾವಣೆಗಳಲ್ಲಿ ಜಯಗಳಿಸಿದ ಅಂಕಿ ಸಂಖ್ಯೆ, ಇತರ ಮಾಹಿತಿ ಪ್ರಕಟಿಸಲಾಗಿದೆ. ಹೊರಟ್ಟಿ ಅವರಿಗೆ ಈಗಾಗಲೆ ಲಂಡನ್‌ನ ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್ ದಾಖಲೆ ಗರಿ 2022ರಲ್ಲಿ ದೊರಕಿದೆ. ಭಾರತದ ಚುನಾವಣಾ ಆಯೋಗದಲ್ಲಿ ಇವರ ಸುದೀರ್ಘ ಸೇವಾ ಅವಧಿಯ ದಾಖಲೆಗಳು ಅಂಕಿ ಸಂಖ್ಯಾ ಇಲಾಖೆಯಲ್ಲಿ ದಾಖಲಿಕರಣಗೊಂಡು ಗೆಜೆಟ್‌ನಲ್ಲಿ ಪ್ರಕಟವಾಗಿವೆ.

## ರೂಪಾಯಿ ರಾಜಸ್ವ ಸಂಗ್ರಹ ಗುರಿ?

# ...ಯರ್ ₹8-10 ಹೆಚ್ಚಳ